# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಸ್.ಎಂ.ದೇವರಾಜ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೂಡಿಗೆರೆ ಮತ್ತಿತರ ಮೂರು ಮಂದಿಯ ವಿರುದ್ಧ ಇಲಾಖಾ ವಿಚಾರಣೆ – ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ.

**ಓದಲಾಗಿದೆ.**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ. ಜಿಪಂಚಿ/ಆ-3 /ಸಿಆರ್-396/ 2007-08, ದಿನಾಂಕ. 21-12-2009 ಮತ್ತು 18-07-2011.
2. ಕಾರಣ ಕೇಳುವ ನೋಟೀಸ್ ಸಂಖ್ಯೆ. ಗ್ರಾಅಪ 21 ಜಿಪಅ 2010, ದಿನಾಂಕ. 09-02-2012.
3. ಶ್ರೀ ಎಸ್.ಎಂ.ದೇವರಾಜ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ. 05-03-2012, ಶ್ರೀ ಎಲ್. ರಾಘವರೆಡ್ಡಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ. 30-03-2012, ಶ್ರೀ ಡಿ. ಚಂದ್ರಶೇಖರ್, ಸಹಾಯಕ ಇಂಜಿನಿಯರ್ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ. 25-02-2012 ಮತ್ತು ಶ್ರೀ ವಿಠಲ್‌ಲಕ್ಕು, ಕಿರಿಯ ಇಂಜಿನಿಯರ್ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ. 03-04-2012.

**ಪ್ರಸ್ತಾವನೆ:**

ಮೂಡಿಗೆರೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗಕ್ಕೆ ಸಂಬಂಧಿಸಿದ ರೋಡ್‌ರೋಲರ್ ಸಂಖ್ಯೆ. ಎ.ಜೆ.289 ವಾಹನವು ದಿನಾಂಕ. 15-03-2005ರಂದು ಕಾಮಗಾರಿ ನಡೆಯುವ ಸ್ಥಳದಲ್ಲಿ ಅಫಘಾತಕ್ಕೀಡಾದಾಗ ಶ್ರೀ ರಾಜಾರಾಮ್, ಕ್ಲೀನರ್ ಮೃತಪಟ್ಟಿದ್ದು, ಮೃತರ ಪತ್ನಿ ಜೆ.ಎಂ.ಎಫ್.ಸಿ. ನ್ಯಾಯಾಲಯದಲ್ಲಿ ಸಲ್ಲಿಸಿದ್ದ ಪ್ರಕರಣ ಸಂಖ್ಯೆ. 510/2005ರಲ್ಲಿ ಇಲಾಖಾ ಪರವಾಗಿ ತೀರ್ಪು ನೀಡಿತ್ತು. ಸದರಿ ತೀರ್ಪನ್ನು ಪ್ರಶ್ನಿಸಿ ಮೃತರ ಪತ್ನಿಯು ಲೇಬರ್ ಆಕ್ಸಿಡೆಂಟ್ ಟ್ರಿಬ್ಯುನಲ್, ಚಿಕ್ಕಮಗಳೂರು ಇಲ್ಲಿ ಸಲ್ಲಿಸಿದ್ದ ಪ್ರಕರಣ ಸಂಖ್ಯೆ. 316/2005ರಲ್ಲಿ ನ್ಯಾಯಾಲಯವು ರೂ. 5,82,760/00 ಗಳನ್ನು ಹಾಗೂ ಶೇ. 6ರಷ್ಟು ಬಡ್ಡಿಯನ್ನು ಒಂದು ತಿಂಗಳೊಳಗಾಗಿ ಪಾವತಿಸಲು ತೀರ್ಪು ನೀಡಿತ್ತು. ಈ ತೀರ್ಪಿನ ವಿರುದ್ಧ ಸರ್ಕಾರದ ಪರವಾಗಿ ಒಂದು ತಿಂಗಳೊಳಗಾಗಿ ಉಚ್ಚ ನ್ಯಾಯಲಯದಲ್ಲಿ ಮೇಲ್ಮನವಿ ಸಲ್ಲಿಸಲು ವಿಫಲರಾದ ಕಾರಣ, ನ್ಯಾಯಲಯವು ಅರ್ಜಿದಾರರಿಗೆ ಪರಿಹಾರ ಮೊತ್ತವಾಗಿ ರೂ. 7,21,286-00 ಗಳನ್ನು ಪಾವತಿಸುವಂತೆ ಆದೇಶಿಸಿದ್ದರ ತಿಳಿಸಿದ್ದರ ಮೇರೆಗೆ ಸದರಿ ಮೊತ್ತವನ್ನು ಅರ್ಜಿದಾರರಿಗೆ ಪಾವತಿಸಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಲು ಈ ಕೆಳಕಂಡ ಅಧಿಕಾರಿ / ನೌಕರರು ಕಾರಣರಾಗಿರುತ್ತಾರೆಂದು ತಿಳಿಸಿ, ಅವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಕೋರಿ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ. 21-12-2009ರ ಪತ್ರದಲ್ಲಿ ಪ್ರಸ್ತಾವನೆಯನ್ನು ಹಾಗೂ ದಿನಾಂಕ. 18-07-2011ರಲ್ಲಿ ದೋಷಾರೋಪನಾ ಪಟ್ಟಿ (ಅನುಬಂಧ-1 ರಿಂದ 4) ಯನ್ನು ಸಲ್ಲಿಸಿದ್ದರು:-

1) *ಶ್ರೀ ಎಸ್.ಎಂ.ದೇವರಾಜ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೂಡಿಗೆರೆ.*
2) *ಶ್ರೀ ಎಲ್. ರಾಘವರೆಡ್ಡಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೂಡಿಗೆರೆ.*
3) *ಶ್ರೀ ಡಿ. ಚಂದ್ರಶೇಖರ್, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೂಡಿಗೆರೆ.*
4) *ಶ್ರೀ ವಿಠಲ್‌ಲಕ್ಕು, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೂಡಿಗೆರೆ.*

— 2

ಮೇಲ್ಕಂಡ ಆಪಾದಿತ ಅಧಿಕಾರಿ / ನೌಕರರಿಗೆ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 09-02-2012ರಲ್ಲಿ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು.

ಆಪಾದಿತ ಅಧಿಕಾರಿ ./ ನೌಕರರು ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕಗಳಂದು ಸಲ್ಲಿಸಿರುವ ಲಿಖಿತ ಹೇಳಿಕೆಗಳಲ್ಲಿ ಅವರುಗಳ ವಿರುದ್ಧ ಮಾಡಲಾದ ಆರೋಪಗಳನ್ನು ನಿರಾಕರಿಸಿರುತ್ತಾರೆ. ಆದರೆ, ಸದರಿಯವರುಗಳು ಕರ್ತವ್ಯಲೋಪವೆಸಗಿ ಬೇಜವಾಬ್ದಾರಿತನ ಪ್ರದರ್ಶಿಸಿರುವ ಪರಿಣಾಮವಾಗಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿರುವುದಕ್ಕೆ ಕಾರಣರಾಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಇವರುಗಳ ವಿರುದ್ಧ ಮಾಡಲಾದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಇಲಾಖಾ ವಿಚಾರಣೆ ಜರುಗಿಸಲು ನಿರ್ಧರಿಸಿ, ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ.

<u>ಆದೇಶ ಸಂಖ್ಯೆ. ಗ್ರಾಅಪ 21 ಜಿಪಅ 2010 , ಬೆಂಗಳೂರು,</u>
<u>ದಿನಾಂಕ.04-06-2012</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮತ್ತು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 13ರನ್ವಯ ಈ ಕೆಳಕಂಡ ಅಧಿಕಾರಿ / ನೌಕರರ ಇವರ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸಲು ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ:-

1) *ಶ್ರೀ ಎಸ್.ಎಂ.ದೇವರಾಜ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೂಡಿಗೆರೆ.*
2) *ಶ್ರೀ ಎಲ್. ರಾಘವರೆಡ್ಡಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೂಡಿಗೆರೆ.*
3) *ಶ್ರೀ ಡಿ. ಚಂದ್ರಶೇಖರ್, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೂಡಿಗೆರೆ.*
4) *ಶ್ರೀ ವಿಠಲ್‌ಲಕ್ಕು, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೂಡಿಗೆರೆ.*

ವಿಚಾರಣಾಧಿಕಾರಿಗಳು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಲ್ಲಿ ನಿಗಧಿಪಡಿಸಿರುವ ಕಾರ್ಯ ವಿಧಾನದ ಪ್ರಕಾರ ವಿಚಾರಣೆ ಜರುಗಿಸಿ ವರದಿಯನ್ನು ನಾಲ್ಕು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

— 3

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
5/6/2012
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು.
6. ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.1242, 8ನೇ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು-560 040 (ದೂರವಾಣಿ ಸಂಖ್ಯೆ 23394245)
7. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು - ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
8. ಸಂಬಂಧಿಸಿದ ಅಧಿಕಾರಿ / ನೌಕರರಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ)
10. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
12. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
13. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.